**ಕರ್ನಾಟಕ ಸರ್ಕಾರ**
**ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ಮಾರ್ಗ, ಕೆ.ಜಿ.ರಸ್ತೆ, ಬೆಂಗಳೂರು – 560 009.**

ಸಂಖ್ಯೆ:ಕಪಂರಾಆ/ಅಭಿವೃದ್ಧಿ/ಗ್ರಂಥಾಲಯ/590/2023 ದಿನಾಂಕ:10.11.2023
E- 1229333

**ಸುತ್ತೋಲೆ**

**ವಿಷಯ :-** 2023-24 ನೇ ಸಾಲಿನ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹವನ್ನು ನವೆಂಬರ್ 14 ರಿಂದ 20 ರವರೆಗೆ ಅರ್ಥಪೂರ್ಣವಾಗಿ ಆಚರಿಸುವ ಕುರಿತು.

****

14ನೇ ನವೆಂಬರ್ 1919 ಭಾರತೀಯ ಗ್ರಂಥಾಲಯ ಚಳುವಳಿಯಲ್ಲಿಯೇ ಒಂದು ಸುಸ್ಮರಣೀಯ ದಿನ. ಆ ದಿನ ಮೊಟ್ಟ ಮೊದಲ ಅಖಿಲ ಭಾರತ ಸಾರ್ವಜನಿಕ ಗ್ರಂಥಾಲಯ ಸಮ್ಮೇಳನದ ಉದ್ಘಾಟನೆಯನ್ನು ಮದ್ರಾಸಿನ (ಚೆನ್ನೈ) ಗೋಖಲೆ ಭವನದಲ್ಲಿ ಬರೋಡೆಯ ಗ್ರಂಥಾಲಯಗಳ ನಿರ್ದೇಶಕ ದಿವಂಗತ ಜೆ.ಎಸ್. ಕುಡಾಲ್ಕರ್ ಅವರು ನೆರವೇರಿಸಿದರು. ಇದರಷ್ಟೇ ಮುಖ್ಯವೆನಿಸುವ ಪಂಡಿತ್ ಜವಹಾರಲಾಲ್ ನೆಹರು ಅವರ ಜನ್ಮದಿನ ಕೂಡ 14ನೇ ನವೆಂಬರ್ ಆಗಿದ್ದು ಅಂದಿನ ದಿನದಿಂದ ಒಂದು ವಾರ ಪೂರ್ತಿ ಗ್ರಂಥಾಲಯ ಸಪ್ತಾಹವೆಂದು ಆಚರಿಸುವುದೆಂದು 1968 ರಲ್ಲಿ ತೀರ್ಮಾನಿಸಲಾಯಿತು. ಮಕ್ಕಳು ನೆಹರು ಅವರ ಹೃದಯಕ್ಕೆ ಅತೀ ಸಮೀಪವಿದ್ದಂತೆಯೇ ಪುಸ್ತಕಗಳು ಹಾಗೂ ಗ್ರಂಥಾಲಯಗಳು ಸಹ ಅವರ ಮೆಚ್ಚಿನವಾಗಿದ್ದುದರಿಂದ ನವೆಂಬರ್ 14 ರಿಂದಲೇ ಒಂದು ವಾರ ಪೂರ್ತಿ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹವೆಂದು ಪ್ರತಿ ವರ್ಷವೂ ಆಚರಿಸಬೇಕೆಂದು ಭಾರತೀಯ ಗ್ರಂಥಾಲಯ ಸಂಘವು ತೀರ್ಮಾನಿಸಿರುತ್ತದೆ.

ಅದರಂತೆ, ಸಾರ್ವಜನಿಕರಿಗೆ ಗ್ರಂಥಗಳು ಹಾಗೂ ಗ್ರಂಥಾಲಯಗಳ ಬಗ್ಗೆ ಆಸಕ್ತಿ ಬೆಳೆಸಲು ಈ ಕೆಳಕಂಡ ಉಪಯುಕ್ತ ಕಾರ್ಯಕ್ರಮಗಳನ್ನು ರೂಪಿಸಿ, ನವೆಂಬರ್ 14 ರಿಂದ 20 ರವರೆಗೆ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಆಚರಣೆಯನ್ನು ಆಚರಿಸಲು ಸೂಚಿಸಿದೆ.

1. ಗ್ರಂಥಗಳು ಮತ್ತು ಗ್ರಂಥಾಲಯಗಳ ಮಹತ್ವ ಬಗ್ಗೆ ಹಾಗೂ ಡಿಜಿಟಲ್ ಗ್ರಂಥಾಲಯಗಳ ಬಳಕೆ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿ, ಓದಲು ಪ್ರೇರೇಪಿಸುವುದು.
2. ಕರ್ನಾಟಕ ಡಿಜಿಟಲ್ ಪಬ್ಲಿಕ್ ಲೈಬ್ರರಿ ಪೋರ್ಟಲ್ ನಲ್ಲಿ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ನಿಮಿತ್ತ ವಿಶೇಷ ಸದಸ್ಯತ್ವ ನೋಂದಣಿ ಅಭಿಯಾನದ ಮೂಲಕ ಸದಸ್ಯರ ಸಂಖ್ಯೆಯನ್ನು ಹೆಚ್ಚಿಸಲು ಕ್ರಮ ಕೈಗೊಳ್ಳುವುದು.
3. ಗ್ರಂಥಾಲಯಗಳಲ್ಲಿ ನೂತನ ಪಠ್ಯ ಪುಸ್ತಕ, ಪರಾಮರ್ಶನ ಮತ್ತು ವಿವಿಧ ಸ್ಪರ್ಧಾತ್ಮಕ ಪುಸ್ತಕಗಳ ಪ್ರದರ್ಶನ ಏರ್ಪಡಿಸುವ ಮೂಲಕ ಯುವ ಜನತೆಯನ್ನು ಗ್ರಂಥಾಲಯಗಳೆಡೆಗೆ ಆಕರ್ಷಿಸುವುದು.

4. ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಪ್ರಯುಕ್ತ ಗ್ರಂಥಾಲಯಗಳ ಮಹತ್ವದ ಬಗ್ಗೆ ವಿಚಾರ ಸಂಕೀರ್ಣ ಏರ್ಪಡಿಸುವುದು.
5. ಗ್ರಂಥಾಲಯಗಳ ಮಹತ್ವದ ಬಗ್ಗೆ ಬಿತ್ತಿ ಚಿತ್ರಗಳನ್ನು (Poster) ತಯಾರಿಸಿ ಸಾರ್ವಜನಿಕರ ಗಮನ ಸೆಳೆಯುವುದು.
6. ಮಕ್ಕಳಿಗಾಗಿ ಪುಸ್ತಕ ಸಂಸ್ಕೃತಿ ಕುರಿತು ಸ್ಪರ್ಧೆಗಳನ್ನು ಏರ್ಪಡಿಸುವುದು.

ಮೇಲಿನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಾರ್ವಜನಿಕರನ್ನು ಗ್ರಂಥಾಲಯಗಳತ್ತ ಸೆಳೆಯಲು ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು.

KSP

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ,(ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
4. ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಮೇಲ್ವಿಚಾರಕರುಗಳು (ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ)
5. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ರವರಿಗೆ ಸೂಕ್ತ ಬೆಂಬಲ ಮತ್ತು ಸಹಕಾರ ನೀಡಲು ಕ್ರಮವಹಿಸುವುದು.
6. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7. ಮಾಹಿತಿ ಕೇಂದ್ರ/ವೆಬ್‌ಸೈಟ್,ಕರ್ನಾಟಕ ಪಂಚಾಯತ್ ರಾಜ್ ಅಯುಕ್ತಾಲಯ, ಬೆಂಗಳೂರು.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.-560 001
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,ಇವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.-560 001
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ.
4. ಕಛೇರಿ ಪ್ರತಿ.